**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ**
**ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ -672/2020**
**ಚಾಸಾ - 03 / ಪ್ರಾಸಾ - 02**

| | |
|---|---|
| ಹೆಸರು | **ಶ್ರೀಧರ್** |
| ತಂದೆಯ ಹೆಸರು | **ದೊಡ್ಡ ನಂಜಯ್ಯ** |
| ವಯಸ್ಸು | **39** |
| ಉದ್ಯೋಗ | **ಖಾಸಗಿ ಕೆಲಸ** |
| ವಿಳಾಸ | **ಮಾರೇನಹಳ್ಳಿ** |

**ದಿನಾಂಕಃ 06-12-2024 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ಈಗ ಸಾಕ್ಷಿಗೆ ನಿಪಿ-1 ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸುಮಾರು 10 ವರ್ಷದ ಹಿಂದೆ ನಾನು ಮಾರನೇಹಳ್ಳಿಯಲ್ಲಿ ನಿಪಿ-1 ಕ್ಕೆ ನನ್ನ ಸಹಿಯನ್ನು ಮಾಡಿರುತ್ತೇನೆ. ನನ್ನ ಜೊತೆ ನಿಪಿ-1 ಕ್ಕೆ ಪ್ರಾಸಾ-1 ಮತ್ತು ಇನ್ನೊಬ್ಬರು ಸಹಿಯನ್ನು ಮಾಡಿರುತ್ತಾರೆ. ಅಪಘಾತದ ವಿಷಯಕ್ಕೆ ಸಂಬಂಧಿಸಿದಂತೆ ನಾನು ನನ್ನ ಸಹಿಯನ್ನು ನಿಪಿ-1 ಕ್ಕೆ ಮಾಡಿರುತ್ತೇನೆ. ನನ್ನ ಸಮಕ್ಷಮದಲ್ಲಿ ಪೋಲೀಸರಸು ಯಾವುದೇ ವಾಹನವನ್ನು ವಶಪಡಿಸಿಕೊಂಡಿರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ದಿ.19-05-2019 ರಂದು ಬೆಳಗ್ಗೆ 7.15 ರಿಂದ 8 ಗಂಟೆ ಸಮಯದಲ್ಲಿ ಚಾಸಾ-1 ರವರು ತೋರಿಸಿದ ಜಾಗದಲ್ಲಿ ಪೋಲೀಸರು ನಿಪಿ-1 ರಂತೆ ಪಂಚನಾಮೆಯನ್ನು ಮಾಡಿ ನಿಮ್ಮ, ಫ್ರಾಸಾ-1 ಮತ್ತು ಚಾಸಾ-1 ರವರ ಸಹಿಯನ್ನು ಪಡೆದುಕೊಂಡರು ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ಪಂಚನಾಮೆಯನ್ನು ಮಾಡುವ ಸಮಯದಲ್ಲಿ ಪೋಲೀಸರು ದ್ವಿಚಕ್ರವಾಹನ ಸಂ.ಕೆಎ-05-ಕೆ. ಆರ್ -8176 ಮತ್ತು ಕಾರಿ ಸಂ. ಕೆಎ-42-ಎ-9163 ವಾಹನವನ್ನು ವಶಪಡಿಸಿಕೊಂಡರು ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ.

ಈಗ ಸಾಕ್ಷಿಗೆ ನಿಪಿ-2 ರಿಂದ 7 ನ್ನು ತೋರಿಸಿದ್ದು, ಅದರಲ್ಲಿ ಇರುವ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ಪಂಚನಾಮೆಯನ್ನು ಮಾಡುವ ಸಮಯದಲ್ಲಿ ಪೋಲೀಸರು ಒಂದು ಕಚ್ಚಾ ನಕ್ಷೆಯನ್ನು ತಯಾರು ಮಾಡಿದ್ದರು ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ಸದರಿ ಪ್ರಕರಣ ನಡೆದು ಸುಮಾರು ವರ್ಷಗಳು ಆಗಿರುವ ಕಾರಣದಿಂದ ನೀವು ಈ ಮೇಲೆ ಹೇಳಿರುವ ವಿಷಯವನ್ನು ಮರೆತ್ತೀರುತ್ತೀರಾ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ಬಗ್ಗೆ ಎಲ್ಲಾ ಮಾಹಿತಿ ತಿಳಿದಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

**ಪಾಟೀ ಸವಾಲುಃ- ಆರೋಪಿಯ ಪರ ಶ್ರೀ.ಸಿ. ಡಿ. ಪಿ, ವಕೀಲರಿಂದಃ-**

ನಿಪಿ-1 ಕ್ಕೆ ನೀವು ಸಹಿ ಹಾಕುವ ಸಮಯದಲ್ಲಿ ಅದರಲ್ಲಿ ಬರೆದಿರುವ ವಿಷಯದ ಬಗ್ಗೆ ತಿಳಿದುಕೊಂಡಿದ್ದೀರಾ ಎಂದರೆ ಸಾಕ್ಷಿಯು ಅದರಲ್ಲಿ ಏನನ್ನೂ ಸಹ ಬರೆದಿರುವುದಿಲ್ಲ ಎನ್ನುತ್ತಾರೆ. ಪಂಚನಾಮೆಗೆ ಸಹಕರಿಸುವಂತೆ ಹೇಳಿ

ಪೋಲೀಸರು ನನಗೆ ಯಾವುದೇ ನೋಟಿಸ್ ನ್ನು ನೀಡಿರುವುದಿಲ್ಲ. ಪಂಚನಾಮೆ ಮಾಡಿದ ಸ್ಥಳದ ಚೆಕ್ಕುಬಂಧಿ ನನಗೆ ಗೊತ್ತು. ಪೂರ್ವ-ಪಶ್ಚಿಮಕ್ಕೆ ಸೇತುವೆ, ದಕ್ಷಿಣ-ಉತ್ತರಕ್ಕೆ ಮಾಗಡಿ-ಬೆಂಗಳೂರು ಮುಖ್ಯ ರಸ್ತೆ ಇದೆ. ನನ್ನ ಜೊತೆ ನಿಪಿ-1 ಕ್ಕೆ ಚಾಸಾ-1 ಮತ್ತು ಪ್ರಾಸಾ-1 ರವರು ಸಹಿಯನ್ನು ಮಾಡಿರುತ್ತಾರೆ. ಪಂಚನಾಮೆ ಮಾಡಿದ ಸಮಯದಲ್ಲಿ ವಶಪಡಿಸಿಕೊಂಡಿರುವ ವಾಹನಗಳ ಸಂಖ್ಯೆ ನನಗೆ ಗೊತ್ತಿಲ್ಲ. ನಿಪಿ-2 ರಿಂದ 7 ರಲ್ಲಿ ತೋರಿಸಿರುವ ಜಾಗದಲ್ಲಿ ನಾನು, ಚಾಸಾ-1 ಮತ್ತು ಪ್ರಾಸಾ-1 ರವರು ನಿಪಿ-1 ಕ್ಕೆ ಸಹಿಯನ್ನು ಮಾಡಿರುತ್ತೇವೆ. ನಿಮಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲದೇ ಇದ್ದರೂ ಸಹ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

**ಮರು ವಿಚಾರಣೆ :- ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**

**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ**
**ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ -**
**ಚಾಸಾ - 01 / ಪ್ರಾಸಾ - 01**

| | |
|---|---|
| ಹೆಸರು | |
| ತಂದೆಯ / ಗಂಡನ ಹೆಸರು | |
| ವಯಸ್ಸು | |
| ಉದ್ಯೋಗ | ವ್ಯವಸಾಯ |
| ವಿಳಾಸ | |

ದಿನಾಂಕಃ **07-03-2024** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ - ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ -**

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

**ಪಾಟೀ ಸವಾಲು - ಆರೋಪಿ ಪರ ಶ್ರೀ.** ವಕೀಲರಿಂದ ಃ-

ಆರೋಪಿಗಳ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಮರು ವಿಚಾರಣೆ- ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**